# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಇವರ ಆದಿಚುಂಚನಗಿರಿ ವಿಶ್ವವಿದ್ಯಾಲಯ ಇದರ ಅಡಿಯಲ್ಲಿನ ಆದಿಚುಂಚನಗಿರಿ ಕಾಲೇಜ್ ಆಫ್ ನರ್ಸಿಂಗ್, ಮಂಡ್ಯ ಈ ಸಂಸ್ಥೆಯಲ್ಲಿ 2019-20ನೇ ಸಾಲಿನಿಂದ ಹೊಸ ಕೋರ್ಸನ್ನು ಪ್ರಾರಂಭಿಸಲು ಹಾಗೂ ಹಾಲಿ ಚಾಲ್ತಿಯಲ್ಲಿರುವ ಕೋರ್ಸುಗಳ ಪ್ರವೇಶ ಮಿತಿಯನ್ನು ಹೆಚ್ಚಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**
1. ರಿಜಿಸ್ಟ್ರಾರ್, ಆದಿಚುಂಚನಗಿರಿ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ: ಎಸಿಯು/ಎಯುಟಿವೈ/ಜಿಒಕೆ-ಎಸಿಎನ್/722/2018-19, ದಿ:27.03.2019
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಏಕ ಕಡತ ಸಂಖ್ಯೆ: ವೈಶಿನಿ/ಎನ್ಆರ್‌ಸಿ(1)/11/2019-20, ದಿನಾಂಕ:20.11.2019.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಪತ್ರದಲ್ಲಿ ರಿಜಿಸ್ಟ್ರಾರ್, ಆದಿಚುಂಚನಗಿರಿ ವಿಶ್ವವಿದ್ಯಾಲಯ ಇವರು ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಇವರ ಆದಿಚುಂಚನಗಿರಿ ವಿಶ್ವವಿದ್ಯಾಲಯ, ಮಂಡ್ಯ ಈ ಸಂಸ್ಥೆಯಲ್ಲಿ ಬಿ.ಎಸ್ಸಿ, ನರ್ಸಿಂಗ್ ಹಾಗೂ ಇನ್ನಿತರೆ ಕೋರ್ಸುಗಳ ಪ್ರವೇಶ ಮಿತಿಯನ್ನು 2019-20ನೇ ಸಾಲಿನಿಂದ ಹೆಚ್ಚಳ ಮಾಡಲು ಹಾಗೂ ಎಂ.ಎಸ್ಸಿ ನರ್ಸಿಂಗ್ ಇನ್ ಮೆಂಟಲ್ ಹೆಲ್ತ್ ನರ್ಸಿಂಗ್ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಬೋರ್ಡ್ ಆಫ್ ಮ್ಯಾನೇಜ್ ಮೆಂಟ್ ನಿರ್ಧರಿಸಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಮೇಲೆ ಓದಲಾದ(2)ರ ಏಕ ಕಡತದಲ್ಲಿ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರು ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಇವರ ಆದಿಚುಂಚನಗಿರಿ ವಿಶ್ವವಿದ್ಯಾಲಯ, ಮಂಡ್ಯ ಈ ಸಂಸ್ಥೆಯಲ್ಲಿ 2019-20ನೇ ಸಾಲಿನಿಂದ 05(ಐದು) ಸೀಟುಗಳ ಪ್ರವೇಶ ಮಿತಿಯೊಂದಿಗೆ ಎಂ.ಎಸ್ಸಿ ನರ್ಸಿಂಗ್ ಇನ್ ಮೆಂಟಲ್ ಹೆಲ್ತ್ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಹಾಗೂ ಹಾಲಿ ಚಾಲ್ತಿಯಲ್ಲಿರುವ ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ನ ಪ್ರವೇಶ ಮಿತಿಯನ್ನು 60(ಅರವತ್ತು) ರಿಂದ 100(ನೂರು) ಸೀಟುಗಳಿಗೆ, ಪಿ.ಬಿ. ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ನ ಪ್ರವೇಶ ಮಿತಿಯನ್ನು 30(ಮೂವತ್ತು) ರಿಂದ 60(ಅರವತ್ತು) ಸೀಟುಗಳಿಗೆ ಹಾಗೂ ಎಂ.ಎಸ್ಸಿ ನರ್ಸಿಂಗ್ ಇನ್ ಮೆಡಿಕಲ್ ಸರ್ಜಿಕಲ್ ನರ್ಸಿಂಗ್, ಓಬಿಜಿ ನರ್ಸಿಂಗ್ ಮತ್ತು ಚೈಲ್ಡ್ ಹೆಲ್ತ್ ನರ್ಸಿಂಗ್ ಕೋರ್ಸುಗಳ ಪ್ರವೇಶ ಮಿತಿಯನ್ನು ತಲಾ 04(ನಾಲ್ಕು) ರಿಂದ 05(ಐದು) ಸೀಟುಗಳಿಗೆ ಹೆಚ್ಚಿಸುವ ಕುರಿತು ಎಲ್ಲಾ ಮೂಲಭೂತ ಸೌಲಭ್ಯಗಳು ಲಭ್ಯವಿರುವ ಬಗ್ಗೆ ಸ್ಥಳೀಯ ತಪಾಸಣಾ ತಂಡದಿಂದ ತಪಾಸಣೆ ನಡೆಸಲು ತಪಾಸಣಾಗಾರರನ್ನು ನೇಮಿಸಿದ್ದು, ಸದರಿ ತಪಾಸಣಾ ತಂಡವು 2019-20ನೇ ಸಾಲಿನಿಂದ ಆದಿಚುಂಚನಗಿರಿ ವಿಶ್ವವಿದ್ಯಾಲಯ, ಮಂಡ್ಯ ಈ ಸಂಸ್ಥೆಯಲ್ಲಿ ಮೇಲ್ಕಂಡ ಕೋರ್ಸ್‌ನ ಪ್ರವೇಶಮಿತಿಯನ್ನು ಹೆಚ್ಚಳ ಮಾಡಬಹುದೆಂದು ಹಾಗೂ ಹೊಸ ಕೋರ್ಸನ್ನು ಪ್ರಾರಂಭಿಸಬಹುದೆಂದು ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಈ ಸಂಬಂಧ ತಪಾಸಣಾ ತಂಡವು ನೀಡಿರುವ ವರದಿ ಹಾಗೂ ಇತರೆ ದಾಖಲಾತಿಗಳನ್ನು ಲಗತ್ತಿಸಿ ಮುಂದಿನ ಸೂಕ್ತಕ್ರಮ ಕೈಗೊಳ್ಳುವಂತೆ ಕೋರಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಇವರ ಆದಿಚುಂಚನಗಿರಿ ವಿಶ್ವವಿದ್ಯಾಲಯ ಇದರ ಅಡಿಯಲ್ಲಿನ ಆದಿಚುಂಚನಗಿರಿ ಕಾಲೇಜ್ ಆಫ್ ನರ್ಸಿಂಗ್, ಬಿ.ಜಿ. ನಗರ, ಎನ್.ಹೆಚ್-75, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ-571448 ಈ ಸಂಸ್ಥೆಯಲ್ಲಿ 2019-20ನೇ ಸಾಲಿನಿಂದ 05(ಐದು) ಸೀಟುಗಳ ಪ್ರವೇಶ ಮಿತಿಯೊಂದಿಗೆ ಎಂ.ಎಸ್ಸಿ ನರ್ಸಿಂಗ್ ಇನ್ ಮೆಂಟಲ್ ಹೆಲ್ತ್ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಹಾಗೂ ಹಾಲಿ ಚಾಲ್ತಿಯಲ್ಲಿರುವ ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ನ ಪ್ರವೇಶ ಮಿತಿಯನ್ನು 60(ಅರವತ್ತು) ರಿಂದ 100(ನೂರು) ಸೀಟುಗಳಿಗೆ, ಪಿ.ಬಿ. ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ನ ಪ್ರವೇಶ ಮಿತಿಯನ್ನು 30(ಮೂವತ್ತು) ರಿಂದ 60(ಅರವತ್ತು) ಸೀಟುಗಳಿಗೆ ಹಾಗೂ ಎಂ.ಎಸ್ಸಿ ನರ್ಸಿಂಗ್ ಇನ್ ಮೆಡಿಕಲ್ ಸರ್ಜಿಕಲ್ ನರ್ಸಿಂಗ್, ಓಬಿಜಿ ನರ್ಸಿಂಗ್ ಮತ್ತು ಚೈಲ್ಡ್ ಹೆಲ್ತ್ ನರ್ಸಿಂಗ್ ಕೋರ್ಸುಗಳ ಪ್ರವೇಶ ಮಿತಿಯನ್ನು ತಲಾ 04(ನಾಲ್ಕು)

. . .2

ರಿಂದ 05(ಐದು) ಸೀಟುಗಳಿಗೆ ಹೆಚ್ಚಿಸಲು ಅನುಮತಿ ನೀಡಲು ತೀರ್ಮಾನಿಸಿ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಕುಕ 143 ಎಂಪಿಎಸ್ 2019, ಬೆಂಗಳೂರು, ದಿನಾಂಕ:13.12.2019.**

ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(5)ರಡಿ ಪದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಇವರ ಆದಿಚುಂಚನಗಿರಿ ವಿಶ್ವವಿದ್ಯಾಲಯ ಇದರ ಅಡಿಯಲ್ಲಿನ ಆದಿಚುಂಚನಗಿರಿ ಕಾಲೇಜ್ ಆಫ್ ನರ್ಸಿಂಗ್, ಬಿ.ಜಿ. ನಗರ, ಎನ್.ಹೆಚ್-75, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ-571448 ಈ ಸಂಸ್ಥೆಯಲ್ಲಿ 2019-20ನೇ ಸಾಲಿನಿಂದ 05(ಐದು) ಸೀಟುಗಳ ಪ್ರವೇಶ ಮಿತಿಯೊಂದಿಗೆ ಎಂ.ಎಸ್ಸಿ ನರ್ಸಿಂಗ್ ಇನ್ ಮೆಂಟಲ್ ಹೆಲ್ತ್ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಹಾಗೂ ಹಾಲಿ ಚಾಲ್ತಿಯಲ್ಲಿರುವ ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ನ ಪ್ರವೇಶ ಮಿತಿಯನ್ನು 60(ಅರವತ್ತು) ರಿಂದ 100(ನೂರು) ಸೀಟುಗಳಿಗೆ, ಪಿ.ಬಿ. ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ನ ಪ್ರವೇಶ ಮಿತಿಯನ್ನು 30(ಮೂವತ್ತು) ರಿಂದ 60(ಅರವತ್ತು) ಸೀಟುಗಳಿಗೆ ಹಾಗೂ ಎಂ.ಎಸ್ಸಿ. ನರ್ಸಿಂಗ್ ಇನ್ ಮೆಡಿಕಲ್ ಸರ್ಜಿಕಲ್ ನರ್ಸಿಂಗ್, ಓಬಿಜಿ ನರ್ಸಿಂಗ್ ಮತ್ತು ಚೈಲ್ಡ್ ಹೆಲ್ತ್ ನರ್ಸಿಂಗ್ ಕೋರ್ಸುಗಳ ಪ್ರವೇಶ ಮಿತಿಯನ್ನು ತಲಾ 04(ನಾಲ್ಕು) ರಿಂದ 05(ಐದು) ಸೀಟುಗಳಿಗೆ ಹೆಚ್ಚಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಅನುಮತಿ ನೀಡಲು ಸರ್ಕಾರವು ಶಿಫಾರಸ್ಸು ಮಾಡಿದೆ.

**ಷರತ್ತು ಮತ್ತು ನಿಬಂಧನೆಗಳು**

1. ಈ ಸಂಸ್ಥೆಯು ಆದಿಚುಂಚನಗಿರಿ ವಿಶ್ವವಿದ್ಯಾಲಯ ಅಧಿನಿಯಮ 2018ರ ಪ್ರಕಾರ ಮೇಲ್ಕಂಡ ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸುಗಳ ಶೇ.40ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ರಾಜ್ಯ ಸರ್ಕಾರ ಮತ್ತು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
3. ಸದರಿ ಸಂಸ್ಥೆಯು ಸ್ವಂತ ಆಸ್ಪತ್ರೆಯನ್ನು ಸರ್ಕಾರ ನಿಗದಿಪಡಿಸಿದ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ, ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.
4. ವಿದ್ಯಾರ್ಥಿಗಳ ಪ್ರವೇಶವನ್ನು 2003ರ ಕರ್ನಾಟಕ ನರ್ಸಿಂಗ್, ಫಾರ್ಮಸಿ & ಫಿಜಿಯೋಥೆರಪಿ ಕೋರ್ಸ್‌ಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಮೇಲ್ಕಂಡ ಕೋರ್ಸುಗಳ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.
5. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
6. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ 1994ರ 48ನೇ ಪ್ರಕರಣದನ್ವಯ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

M. Jyothi Prakash 13-12-19

**(ಎಂ.ಜ್ಯೋತಿ ಪ್ರಕಾಶ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

**ಇವರಿಗೆ:**

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.

2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ 4ನೇ ಟಿ-ಬ್ಲಾಕ್, ಬೆಂಗಳೂರು.
3. ಪ್ರಾಂಶುಪಾಲರು/ಕಾರ್ಯದರ್ಶಿ/ಅಧ್ಯಕ್ಷರು, ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಇವರ ಆದಿಚುಂಚನಗಿರಿ ವಿಶ್ವವಿದ್ಯಾಲಯ ಇದರ ಅಡಿಯಲ್ಲಿನ ಆದಿಚುಂಚನಗಿರಿ ಕಾಲೇಜ್ ಆಫ್ ನರ್ಸಿಂಗ್, ಬಿ.ಜಿ. ನಗರ, ಎನ್.ಹೆಚ್-75, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ-571 448.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ,

1) ಮಾನ್ಯ ಉಪಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.